# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.01 | Issue. 317 | Pages. 2 | Date: 13-11-2025, THURSDAY | RNI NO: KARKAN/2024/89601 | Kannada Daily

ಸಂಪುಟ : 01 - ಸಂಚಿಕೆ : 317 - ಪುಟಗಳು : 2 | 13-11-2025 | ಗುರುವಾರ | Ph: 8762954248 | ದರ : ₹1


## ಮಾನವ-ಕಾಡಾನೆ ಸಂಘರ್ಷ ತಡೆಗೆ ಕ್ರಮ ವಹಿಸಿ

### ಶ್ರೀಲಂಕಾ ಮಾದರಿ ಆನೆಧಾಮ ನಿರ್ಮಿಸಿ | ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ಆಗ್ರಹ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ವರ್ಷದಿಂದ ವರ್ಷಕ್ಕೆ ಬಿಗಡಾಯಿಸುತ್ತಿರುವ ಕಾಡಾನೆ-ಮಾನವ ಸಂಘರ್ಷ ತಡೆಗೆ ಶ್ರೀಲಂಕಾ ಮಾದರಿ ಆನೆಧಾಮ ನಿರ್ಮಾಣವೇ ಪರಿಹಾರವಾಗಿದ್ದು ಸರ್ಕಾರ ಆ ನಿಟ್ಟಿನಲ್ಲಿ ಗಮನ ಹರಿಸಬೇಕು ಎಂದು ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ದೇಶದಲ್ಲಿ 6 ಸಾವಿರ ಆನೆಗಳಿದ್ದು ಅದರಲ್ಲಿ 250 ಆನೆಗಳಷ್ಟೇ ಕಾಡಿನಿಂದ ನಾಡಿಗೆ ಬಂದಿವೆ. ಅವು ಆಹಾರ ಪದ್ಧತಿಯಲ್ಲಿ ಸಂಪೂರ್ಣ ಬದಲಾವಣೆ ಮಾಡಿಕೊಂಡಿರುವುದರಿಂದ ಕಾಡಿನಲ್ಲಿ ನೆಲೆಸುವುದು ಅಸಾಧ್ಯ. ಆದ್ದರಿಂದ ಶ್ರೀಲಂಕಾ ಮಾದರಿಯಲ್ಲಿ ಆನೆಧಾಮ ನಿರ್ಮಿಸಿ ವಸತಿ ವ್ಯವಸ್ಥೆ ಕಲ್ಪಿಸಬೇಕು. ಈ ಬಗ್ಗೆ 2006ರಲ್ಲಿ ನಾನು ಶಾಸಕನಾಗಿದ್ದಾಗ ವರದಿ ತಯಾರಿಸಿ ಅಂದಿನ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಸಲ್ಲಿಸಿದ್ದೆ. ಬದಲಾದ ರಾಜಕೀಯ ಸನ್ನಿವೇಶದಲ್ಲಿ ಸರ್ಕಾರ ಬದಲಾಗಿ ಸಮಸ್ಯೆ ಇಂದಿಗೂ ಜೀವಂತವಾಗಿದೆ ಎಂದರು.

ಸಕಲೇಶಪುರ ತಾಲ್ಲೂಕಿನಲ್ಲಿ 80 ಆನೆಗಳಿವೆ ಎಂದು ಅರಣ್ಯ ಇಲಾಖೆ ಹೇಳುತ್ತಿದೆ. 2005 ರಿಂದ ಇಲ್ಲಿವರೆಗೆ 80 ಜನರು ಆನೆ ದಾಳಿಗೆ ಮೃತಪಟ್ಟಿದ್ದಾರೆ. ಸಕಲೇಶಪುರದಲ್ಲಿ ಕಾಡಂಚಿನ ಗ್ರಾಮಗಳು 11 ಇವೆ. ಈ ವ್ಯಾಪ್ತಿಯಲ್ಲಿ 8 ಜನರು ಮೃತಪಟ್ಟರೆ 72 ಜನರು ಅರಣ್ಯ ಬಿಟ್ಟು ದೂರದಲ್ಲಿರುವವರಾಗಿದ್ದಾರೆ. ಕಾಡಾನೆಗಳು ತಮ್ಮ ವ್ಯಾಪ್ತಿ ಬಿಟ್ಟು ಜನವಸತಿ ಪ್ರದೇಶಕ್ಕೆ ಬಂದಿರುವುದೇ ಸಾವು ನೋವಿಗೆ ನಿದರ್ಶನ ಎಂದು ಹೇಳಿದರು.




ಈ ಎಲ್ಲಾ ಆನೆಗಳಿಗೆ ನಿತ್ಯ 80 ರಿಂದ 100 ಟನ್ ಆಹಾರ ಬೇಕಿದೆ. ಆನೆಗಳು ಆಹಾರ ತಿನ್ನುವುದಕ್ಕಿಂತ ತುಳಿದು ಹಾಳಾಗುವುದೇ ಹೆಚ್ಚು. ಚಿಕ್ಕಮಗಳೂರು, ಕೊಡಗು ಹಾಗೂ ಜಿಲ್ಲೆಯ 300ಕ್ಕೂ ಹೆಚ್ಚು ಹಳ್ಳಿಗಳು ಕಾಡಾನೆ ದಾಳಿಯಿಂದ ಬಾಧಿತವಾಗಿವೆ. ಸಮಸ್ಯೆಗೆ ಗ ಕಡಿವಾಣ ಹಾಕಬೇಕೆಂದರೆ ಶ್ರೀಲಂಕಾ ಮಾದರಿಯಲ್ಲಿ ಆನೆಧಾಮ ನಿರ್ಮಾಣ ಮಾಡಬೇಕು. ಅದಕ್ಕಾಗಿ ಶೀಘ್ರವೇ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಬಳಿ ನಿಯೋಗ ತೆರಳುವುದಾಗಿ ತಿಳಿಸಿದರು.

**ಪ್ರವಾಸೋದ್ಯಮಕ್ಕೆ ನೆರವು**

ಶ್ರೀಲಂಕಾದ ಕಾಂಡಾ ಜಿಲ್ಲೆಯಲ್ಲಿ 26 ಹೆಕ್ಟೇರ್ ಪ್ರದೇಶದಲ್ಲಿ ಆನೆಧಾಮ ನಿರ್ಮಿಸಲಾಗಿದೆ. ಆನೆಗಳಿಗೆ ಆಹಾರವನ್ನು ಸರ್ಕಾರವೇ ಒದಗಿಸುತ್ತದೆ. ಅದನ್ನು ಪ್ರವಾಸಿ ತಾಣವಾಗಿ ಮಾರ್ಪಡಿಸಿರುವುದರಿಂದ ಹೆಚ್ಚಿನ ಸಂಖ್ಯೆಯ ಜನರು ಬರುತ್ತಾರೆ. ಅದರಿಂದ ಪ್ರವಾಸೋದ್ಯಮ ವೃದ್ಧಿಯಾಗಿ ಸರ್ಕಾರಕ್ಕೆ ಆದಾಯವೂ ಹೆಚ್ಚುತ್ತಿದೆ. ಅದೇ ರೀತಿ ನಮ್ಮ ರಾಜ್ಯದಲ್ಲೂ ಆಗಬೇಕು ಎಂದು ಆಗ್ರಹಿಸಿದರು.

> ನಾನು ಶ್ರೀಲಂಕಾಗೆ ಭೇಟಿ ನೀಡಿ ಅಲ್ಲಿ ಕೈಗೊಂಡಿರುವ ಕ್ರಮಗಳ ಕುರಿತು ಅಧ್ಯಯನ ಮಾಡಿದ್ದೇನೆ. ನ. 17ರ ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ನಿಯೋಗದೊಂದಿಗೆ ಭೇಟಿಯಾಗಿ ಮನವರಿಕೆ ಮಾಡಿಕೊಡಲಾಗುವುದು. ಅಧಿಕಾರಿಗಳು ಈ ನಿಟ್ಟಿನಲ್ಲಿ ಯೋಚಿಸಬೇಕು.
>
> – ಹೆಚ್.ಎಂ.ವಿಶ್ವನಾಥ್, ಮಾಜಿ ಶಾಸಕ

ರಾಜ್ಯ ಸರ್ಕಾರ ಶೀಘ್ರ ಅಧಿಕಾರಿಗಳು, ಜನಪ್ರತಿನಿಧಿ ಹಾಗೂ ಸಂತ್ರಸ್ತರ ನಿಯೋಗವನ್ನು ಶ್ರೀಲಂಕಾಕ್ಕೆ ಕಳುಹಿಸಿ ಅಲ್ಲಿ ಆನೆ ಧಾಮಗಳ ನಿರ್ವಹಣಾ ವಿಧಾನ ಕುರಿತು ಸಮಗ್ರ ಅಧ್ಯಯನ ನಡೆಸಲು ಸೂಚಿಸಬೇಕು. ಬಳಿಕ ಕಾಡಾನೆ ಸಮಸ್ಯೆ ಹೆಚ್ಚಿರುವ ಜಿಲ್ಲೆಗಳಲ್ಲಿ ತುರ್ತಾಗಿ ಆನೆಧಾಮ ನಿರ್ಮಾಣ ಮಾಡಲು, ಅದಕ್ಕಾಗಿ ಯೋಜನೆ ರೂಪಿಸಬೇಕು. ಆನೆ ದಾಳಿಯಿಂದ ವ್ಯಕ್ತಿ ಮೃತಪಟ್ಟಾಗ ಕುಟುಂಬಸ್ಥರಿಗೆ ಪರಿಹಾರ ಘೋಷಣೆ, ರೈಲ್ವೆ ಬ್ಯಾರಿಕೇಡ್ ನಿರ್ಮಾಣ, ಹೊರಗುತ್ತಿಗೆ ನೌಕರರಿಂದ ಆನೆ ಓಡಿಸುವುದರಿಂದ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗುವುದಿಲ್ಲ. ಈ ನಿಟ್ಟಿನಲ್ಲಿ ಗಂಭೀರ ಚಿಂತನೆ ನಡೆಸಬೇಕಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾಫಿ ಬೆಳೆಗಾರರಾದ ಡಾ. ಹೆಚ್.ಟಿ.ಮೋಹನ್ ಕುಮಾರ್, ಕೆ.ಬಿ.ಕೃಷ್ಣಪ್ಪ ಹಾಜರಿದ್ದರು.

## ಕಾಡಾನೆ ಭೀಮ ಆರೋಗ್ಯವಾಗಿದ್ದಾನೆ-ವದಂತಿ ಹರಡಬೇಡಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಕಾಡಾನೆ ಜೊತೆಗಿನ ಕಾದಾಟದಲ್ಲಿ ದಂತ ಕಳೆದುಕೊಂಡಿರುವ ಭೀಮ ಹೆಸರಿನ ಆನೆ ಆರೋಗ್ಯವಾಗಿದ್ದು ಸಾಮಾಜಿಕ ಜಾಲತಾಣಗಳಲ್ಲಿ ಬಿತ್ತರವಾಗುತ್ತಿರುವ ವದಂತಿಗಳನ್ನು ಯಾರೂ ನಂಬಬಾರದು ಎಂದು ಉಪ ಅರಣ್ಯ ಸಂರಕ್ಷಣಾಧಿಕಾರಿ ಸೌರಭ್ ಕುಮಾರ್ ಹೇಳಿದ್ದಾರೆ.

ನ.9ರಂದು ಕಾಡಾನೆಗಳ ನಡುವೆ ನಡೆದ ಕಾಳಗದಲ್ಲಿ ಸ್ಥಳೀಯವಾಗಿ ಭೀಮ ಎಂದು ಕರೆಯಲ್ಪಡುವ ಗಂಡು ಕಾಡಾನೆ ಮತ್ತು ಕ್ಯಾಪ್ಟನ್ ಎಂಬ ಮತ್ತೊಂದು ಕಾಡಾನೆಯೊಂದಿಗೆ ಕಾಳಗ ನಡೆಸುವ ವೇಳೆ ಭೀಮ ಕಾಡಾನೆಯ ಎಡ ಬದಿಯ ದಂತವು ಮುರಿದು ಬಿದ್ದು ಗಾಯಗೊಂಡಿತ್ತು. ಈ ಬಗ್ಗೆ ಅರಣ್ಯ ಇಲಾಖೆ ಅಧಿಕಾರಿಗಳು ಹಾಗೂ ಪಶುವೈದ್ಯಾಧಿಕಾರಿಗಳು ಕಾಡಾನೆ ಮೇಲೆ ನಿಗಾ ವಹಿಸಿ, ಪರಿಶೀಲಿಸಿದ ವೇಳೆ ಆರೋಗ್ಯಕರವಾಗಿರುವುದು ಕಂಡು ಬಂದಿದೆ ಎಂದು ತಿಳಿಸಿದ್ದಾರೆ.

ಕಾಡಾನೆ ಭೀಮ ನೀರನ್ನು ಕುಡಿಯುತ್ತಿರುವುದು ಮತ್ತು ಹುಲ್ಲು ಹಾಗೂ ಇತರೆ ಮೇವನ್ನು ತಿನ್ನುತ್ತಿರುವುದನ್ನು ಗಮನಿಸಲಾಗಿರುತ್ತದೆ. ಕಾಡಾನೆಯು ಕೆಸರು ಮಣ್ಣನ್ನು ಮೈ ಮೇಲೆ ಹಾಕಿಕೊಂಡು ಓಡಾಡಿಕೊಂಡಿದ್ದು ಆರೋಗ್ಯಕರವಾಗಿರುವುದು ಕಂಡು ಬಂದಿದೆ. ಕಾಳಗದ ನಂತರವೂ ಭೀಮ, ಬೇಲೂರು ತಾಲ್ಲೂಕಿನ ಬಿಕ್ಕೋಡು ಭಾಗದಿಂದ ಸಕಲೇಶಪುರ ತಾಲ್ಲೂಕಿನ ಉದೇವಾರ ಭಾಗಕ್ಕೆ ತೆರಳಿ, ಪುನಃ ಬೇಲೂರಿನ ಬಿಕ್ಕೋಡು ಭಾಗಕ್ಕೆ ಬಂದಿದೆ. ಸದ್ಯ ಬಿಕ್ಕೋಡು ಬಳಿಯ ಬಕ್ರವಳ್ಳಿ ಕಿತ್ತಗೆರೆ ಭಾಗದಲ್ಲಿ ಬೀಡುಬಿಟ್ಟಿದೆ ಎಂದು ಮಾಹಿತಿ ನೀಡಿದ್ದಾರೆ.

ಕಾಡಾನೆ ಆರೋಗ್ಯವಾಗಿದ್ದರೂ ಇತ್ತೀಚೆಗೆ ಹಲವು ಸಾಮಾಜಿಕ ಜಾಲ ತಾಣಗಳಲ್ಲಿ ಕಾಡಾನೆ ಭೀಮ, ಗಾಯಗೊಂಡಿದ್ದಾನೆ. ಚಿಕಿತ್ಸೆ ನೀಡದೆ ನಿರ್ಲಕ್ಷ್ಯ ತೋಡಲಾಗುತ್ತಿದೆ ಎಂದು ತಪ್ಪು ಸಂದೇಶಗಳನ್ನು ರವಾನಿಸಲಾಗುತ್ತಿದೆ. ಸಾರ್ವಜನಿಕರುಗಳು ಇಂತಹ ಸಂದೇಶಗಳನ್ನು ನಂಬಬಾರದು. ಅರಣ್ಯ ಇಲಾಖೆ ಅನುಮತಿ ಪಡೆಯದೆ ವನ್ಯಜೀವಿಗಳ ಬಳಿ ತೆರಳಿ ಛಾಯಾಚಿತ್ರ ತೆಗೆಯುವುದು, ವೀಡಿಯೊಗಳನ್ನು ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವುದು ಶಿಕ್ಷಾರ್ಹ ಅಪರಾಧ ಎಂದು ಎಚ್ಚರಿಕೆ ನೀಡಿದ್ದಾರೆ.

## ಡಯಾಬಿಟಿಸ್ ಜಾಗೃತಿ: ನ.14 ರಂದು ವಾಕಥಾನ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ವಿಶ್ವ ಡಯಾಬಿಟಿಷ್ ದಿನದ ಅಂಗವಾಗಿ ಆರೋಗ್ಯವೇ ಜೀವನದ ನಿಜವಾದ ಸಂಪತ್ತು ಎಂಬ ಸಂದೇಶದೊಂದಿಗೆ ನ.14 ರಂದು ಬೆಳಗ್ಗೆ ನಗರದಲ್ಲಿ ವಾಕಥಾನ್ ಹಮ್ಮಿಕೊಳ್ಳಲಾಗಿದೆ ಎಂದು ಇಂಡಿಯಾನ ಆಸ್ಪತ್ರೆಯ ಜನರಲ್ ಮೆಡಿಸನ್ ಡಯಾಬಿಟಾಲಜಿಸ್ಟ್ ಮತ್ತು ಕ್ಲಿನಿಕಲ್ ಕಾರ್ಡಿಯಾಲಜಿಸ್ಟ್ ಡಾ.ವಿಶ್ವಾಸ್ ಎಂ.ಕೆ. ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಇಂಡಿಯಾನ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಮತ್ತು ಹಾರ್ಟ್ ಸೆಂಟರ್ ವತಿಯಿಂದ ಅಂದು ಬೆಳಿಗ್ಗೆ ನಗರದ ಹೇಮಾವತಿ ಪ್ರತಿಮೆ ಬಳಿಯಿಂದ ಹೊರಟು ಇಂಡಿಯಾನ ಆಸ್ಪತ್ರೆ ವರೆಗೆ ಸಂಚರಿಸಲಿದೆ ಎಂದು




ತಾಲೂಕು ಆರೋಗ್ಯಾಧಿಕಾರಿ ಡಾ.ವಿಜಯ್ ಗೊರೂರು ಜಾಥಾಕ್ಕೆ ಚಾಲನೆ ನೀಡುವರು.

ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಡಾ. ಹೆಚ್.ಎಂ. ಕುಮಾರ್, ಡಾ. ಮೊಹಮ್ಮದ್ ಅನ್ವರ್, ಡಾ. ಈಶ್ವರ್ ಭಟ್, ಕಾರ್ಮಿಕ ಕಲ್ಯಾಣಾಧಿಕಾರಿ ಕೆ.ಟಿ. ರವಿ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಕೆ.ಆರ್. ಅನುಪಮ, ಸಮಾಜ ಸೇವಕ ಬೋರೇಗೌಡ, ಸಂಸ್ಕೃತ ಸಂಘದ ಅಧ್ಯಕ್ಷ ಎಂ.ಎಸ್. ಶ್ರೀಕಂಠಯ್ಯ, ಪ್ರಾಧ್ಯಾಪಕ ಧರಣಿ ಕುಮಾರ್ ಸೇರಿ ಅನೇಕ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಡಯಾಬಿಟಿಸ್ ಎನ್ನುವುದು ಇಂದಿನ ಜೀವನ ಶೈಲಿಯಿಂದ ಉಂಟಾಗುವ ಅತ್ಯಂತ ಸಾಮಾನ್ಯ ಆರೋಗ್ಯ ಸಮಸ್ಯೆ, ಆದರೆ ಗಂಭೀರ ಆಗಿದೆ. ಈ ರೋಗದ ಬಗ್ಗೆ ಜಾಗೃತಿ ಮೂಡಿಸಿ,

ಜನರಲ್ಲಿ ಆರೋಗ್ಯಕರ ಜೀವನ ಶೈಲಿಯತ್ತ ಒಲವು ತರಬೇಕೆಂಬ ಉದ್ದೇಶದಿಂದ ವಾಕ್‌ಥಾನ್ ಹಮ್ಮಿಕೊಳ್ಳಲಾಗಿದೆ ಎಂದರು. ಡಯಾಬಿಟಿಸ್ ಕಾಯಿಲೆ ಇಂದಿನ ತಲೆಮಾರಿಗೆ ಸವಾಲಾಗಿದ್ದು, ಅದನ್ನು ತಡೆಗಟ್ಟಲು ವೈದ್ಯರ ಸಲಹೆಯೊಂದಿಗೆ ಆಹಾರ ನಿಯಮ, ನಿತ್ಯ ವ್ಯಾಯಾಮ, ಧೂಮಪಾನ-ಮದ್ಯಪಾನ ತ್ಯಾಗ ಮತ್ತು ಮಾನಸಿಕ ಶಾಂತಿ ಅಗತ್ಯ. ಕಾಯಿಲೆಯನ್ನು ನಿರ್ಲಕ್ಷಿಸುವುದರಿಂದ ಹೃದಯ, ಮೂತ್ರಪಿಂಡ, ಕಣ್ಣು ಮತ್ತು ನರ ಸಂಬಂಧಿ ಸಮಸ್ಯೆಗಳು ಉಂಟಾಗಬಹುದು ಎಂದು ಎಚ್ಚರಿಸಿದರು. ಆಸ್ಪತ್ರೆ ವತಿಯಿಂದ ಜಾಗೃತಿ ಪಥ ಸಂಚಲನ ಜೊತೆಗೆ ಉಚಿತ ರಕ್ತದಲ್ಲಿನ ಸಕ್ಕರೆ ಪರೀಕ್ಷೆ, ಡಯಾಬಿಟಿಸ್ ತಡೆಗಟ್ಟುವ ಸಲಹೆ ಶಿಬಿರ ಹಾಗೂ ಆರೋಗ್ಯ ತಜ್ಞರೊಂದಿಗೆ ಸಂವಾದ ಕಾರ್ಯಕ್ರಮವನ್ನು ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದರು.

## ಸಂವಿಧಾನ ಓದು: ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆ ನ. 17ಕ್ಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಹಾಗೂ ಸಂವಿಧಾನ ಓದು ಅಭಿಯಾನ ಕರ್ನಾಟಕ ವತಿಯಿಂದ ಸಂವಿಧಾನ ಕುರಿತು ಪದವಿ ವಿದ್ಯಾರ್ಥಿಗಳಿಗೆ ಜಿಲ್ಲಾ ಮಟ್ಟದ ಪ್ರಥಮ ಜಿಲ್ಲಾ ಮಟ್ಟದ ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿದೆ ಎಂದು ಸಂಚಾಲಕ ರಾಜು ಗೊರೂರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ನ.17 ರಂದು ಮಧ್ಯಾಹ್ನ 1 ಗಂಟೆಗೆ ಗಂಧದ ಕೋಠಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸ್ಪರ್ಧೆ ನಡೆಯಲಿದೆ. ನ.14ರ ಒಳಗೆ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜು ಗಂಧದಕೋಠಿ ಪ್ರಾಂಶುಪಾಲರಿಗೆ ದೃಢೀಕರಣ ಪತ್ರ ಕಳಿಸಬೇಕು ಎಂದರು.




ಸಂವಿಧಾನ ಮತ್ತು ಮೂಲಭೂತ ಹಕ್ಕುಗಳು-ಕರ್ತವ್ಯಗಳು, ಸಂವಿಧಾನ ಮತ್ತು ಸಾಮಾಜಿಕ ನ್ಯಾಯ, ಸಂವಿಧಾನ ಮತ್ತು ಮಹಿಳೆ ಮತ್ತು ಸಂವಿಧಾನ ಮತ್ತು ಒಕ್ಕೂಟ ವ್ಯವಸ್ಥೆ ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯದ ಮೇಲೆ ಕನ್ನಡ ಅಥವಾ ಆಂಗ್ಲ ಭಾಷೆಯಲ್ಲಿ ಪ್ರಬಂಧ ಬರೆಯಬೇಕು ಎಂದರು.

ಒಂದು ಕಾಲೇಜಿನಿಂದ ಐವರು ವಿದ್ಯಾರ್ಥಿಗಳು, ಪ್ರಾಂಶುಪಾಲರ ದೃಢೀಕರಣ ಪತ್ರದೊಂದಿಗೆ ಭಾಗವಹಿಸಬಹುದು. ಬಿಎ, ಬಿಕಾಂ, ಬಿಬಿಎ, ಬಿಸಿಎ, ಬಿಎಫ್‌ಎ, ಬಿಇ, ಎಂಬಿಬಿಎಸ್, ಬಿವಿಎಸ್‌ಸಿ, ಬಿಎಸ್‌ಸಿ ಅಗ್ರಿ, ನರ್ಸಿಂಗ್ ಹಾಗೂ 5 ವರ್ಷಗಳ ಕಾನೂನು ವಿದ್ಯಾರ್ಥಿಗಳು ಮಾತ್ರ ಸ್ಪರ್ಧೆಯಲ್ಲಿ ಭಾಗಿಯಾಗಬಹುದು ಎಂದರು.

ವಿದ್ಯಾರ್ಥಿಗಳು ಕಾಲೇಜಿನ ಐಡಿಕಾರ್ಡ್ ತರಬೇಕು. ನಿಗದಿತ ದಿನಾಂಕ ಮತ್ತು ಸ್ಥಳಗಳಲ್ಲೇ ಪ್ರಬಂಧ ಬರೆಯಬೇಕು. ಹಾಳೆಗಳನ್ನು ಸ್ಥಳದಲ್ಲೇ ಒದಗಿಸಲಾಗುವುದು. ಸಮಯ ಒಂದೂವರೆ ಗಂಟೆ ಇರಲಿದೆ. ಪ್ರಯಾಣ ಭತ್ಯೆ, ವಸತಿ ವ್ಯವಸ್ಥೆಯನ್ನು ವಿದ್ಯಾರ್ಥಿಗಳೇ ಭರಿಸಿಕೊಳ್ಳಬೇಕು ಎಂದರು.

ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ 10 ಸಾವಿರ ಪ್ರಥಮ ಬಹುಮಾನ, 5 ಸಾವಿರ ದ್ವಿತೀಯ ಬಹುಮಾನ, 3 ಸಾವಿರ ತೃತೀಯ ಬಹುಮಾನ ಹಾಗೂ 10 ವಿದ್ಯಾರ್ಥಿಗಳಿಗೆ 1 ಸಾವಿರ ಸಮಾಧಾನಕರ ಬಹುಮಾನ ನೀಡಲಾಗುವುದು ಎಂದು ತಿಳಿಸಿದರು.

ಆಸಕ್ತ ವಿದ್ಯಾರ್ಥಿಗಳು 9448427170/9980895611/9448425236 ಇಲ್ಲಿಗೆ ಸಂಪರ್ಕಿಸಲು ಕೋರಿದರು.

ಸುದ್ದಿಗೋಷ್ಠಿಯಲ್ಲಿ ನಿವೃತ್ತ ಅಧಿಕಾರಿಗಳಾದ ಹೆಚ್.ಟಿ.ವಿಜಯ ಕುಮಾರ್, ಹುಲಿಕಲ್ ರಾಜಶೇಖರ್, ದೇವೇಗೌಡ, ಜಿ.ಟಿ.ವೆಂಕಟೇಶ್, ಜಯದೇವಯ್ಯ ಇದ್ದರು.

## ಬಸ್‌ಗೆ ಡಿಕ್ಕಿಯಾಗಿ ತರಕಾರಿ ಅಂಗಡಿಗೆ ನುಗ್ಗಿದ ಕಾರು




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ನಿರ್ಲಕ್ಷ್ಯದ ಚಾಲನೆಯಿಂದ ಕಾರು ಕೆಎಸ್‌ಆರ್‌ಟಿಸಿ ಬಸ್‌ಗೆ ಡಿಕ್ಕಿ ಹೊಡೆದು ಅಂಗಡಿಯೊಂದಕ್ಕೆ ನುಗ್ಗಿ ಹಾನಿಯಾಗಿದೆ.

ಪಟ್ಟಣದ ಹಳೇ ರಾಷ್ಟ್ರೀಯ ಹೆದ್ದಾರಿ 75ರ ಬಾಳೆಗದ್ದೆ ಬಡಾವಣೆಯಲ್ಲಿರುವ ಕುಬೇರ ಹೋಟೆಲ್ ಸಮೀಪ ಐ20 ಕಾರು ಚಾಲಕ ರಸ್ತೆಯ ಒಂದು ಭಾಗದಿಂದ ಇನ್ನೊಂದು ಭಾಗಕ್ಕೆ ಬರುತ್ತಿದ್ದಾಗ ಬೆಂಗಳೂರಿನಿಂದ ಧರ್ಮಸ್ಥಳಕ್ಕೆ ಹೋಗುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ಡಿಕ್ಕಿ ಮಾಡಿ ಮತ್ತೊಂದು ಬದಿಯಲ್ಲಿದ್ದ ತರಕಾರಿ ಅಂಗಡಿಗೆ ನುಗ್ಗಿದೆ. ಅದೃಷ್ಟವಶಾತ್ ತರಕಾರಿ ಅಂಗಡಿಯವರು ದೂರವಿದ್ದ ಕಾರಣ ಭಾರೀ ಅನಾಹುತ ತಪ್ಪಿದೆ. ಕಾರು ನುಗ್ಗಿದ ರಭಸಕ್ಕೆ ರಸ್ತೆ ಬದಿಯ ತರಕಾರಿ ಅಂಗಡಿಗೆ ಹಾನಿಯುಂಟಾಗಿದೆ. ಅಂಗಡಿ ಮುಂಭಾಗ ನಿಲುಗಡೆ ಮಾಡಿದ್ದ ಮಾರುತಿ ರಿಡ್ಜ್ ಕಾರಿಗೂ ಸಹ ಬಸ್ ಡಿಕ್ಕಿ ಹೊಡೆದಿದ್ದು ಅದೃಷ್ಟವಶಾತ್ ಯಾರಿಗೂ ಅಪಾಯ ಸಂಭವಿಸಿಲ್ಲ. ಕಾರಿಗೆ ಬಸ್ ಡಿಕ್ಕಿ ಹೊಡೆದಿರುವ ದೃಶ್ಯ ಸಮೀಪದ ಸಿಸಿಟಿವಿಯಲ್ಲಿ ದಾಖಲಾಗಿರುವುದು ವೈರಲ್ ಆಗಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸರ್ಕಾರಿ ಶಾಲೆಗಳಿಗೆ ಸೌಕರ್ಯ ಕಲ್ಪಿಸಲು ಆದ್ಯತೆ: ಸಿಮೆಂಟ್ ಮಂಜು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಸರ್ಕಾರಿ ಶಾಲೆಗಳಲ್ಲಿ ಓದಿರುವ ಹಲವಾರು ವಿದ್ಯಾರ್ಥಿಗಳು ಸಮಾಜದಲ್ಲಿ ಗಣ್ಯ ವ್ಯಕ್ತಿಗಳಾಗಿ ಬೆಳೆದಿದ್ದಾರೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಕುಡುಗರಹಳ್ಳಿ ಹಾಗೂ ಅಗ್ರಹಾರ ಬಡಾವಣೆಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ನೂತನ ಶೌಚಾಲಯ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಪ್ರತಿಯೊಂದು ಸರ್ಕಾರಿ ಶಾಲೆಗಳಿಗೂ ಅವಶ್ಯ ಮೂಲಸೌಕರ್ಯ ಸರ್ಕಾರ ಕಲ್ಪಿಸಬೇಕು. ಸರ್ಕಾರಿ ಶಾಲೆಗಳಲ್ಲಿ ಓದಿದ ಹಲವಾರು ವಿದ್ಯಾರ್ಥಿಗಳು ಉನ್ನತ ಸ್ಥಾನಕ್ಕೆ ತಲುಪಿದ್ದಾರೆ. ಹೀಗಾಗಿ ಸರ್ಕಾರಿ ಶಾಲೆಗಳ ಕುರಿತು ಯಾರಿಗೂ ಕೀಳರಿಮೆ ಬೇಡ, ಕುಡುಗರಹಳ್ಳಿ ಬಡಾವಣೆಯಲ್ಲಿರುವ



ಈ ಶಾಲೆಯಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದು ಸಂತೋಷದ ವಿಷಯ. ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಶೌಚಾಲಯ ನಿರ್ಮಾಣಕ್ಕೆ 5.20 ಲಕ್ಷ ರೂ. ಮೀಸಲಿಡಲಾಗಿದೆ. ಈ ಶಾಲೆಯಲ್ಲಿ ರಂಗ ಮಂದಿರ ನಿರ್ಮಾಣಕ್ಕೆ 5 ಲಕ್ಷ ರೂ. ನನ್ನ ಅನುದಾನದಲ್ಲಿ ನೀಡುತ್ತಿದ್ದೇನೆ. ಶಾಲೆಗಳ ಅಭಿವೃದ್ಧಿಗೆ ಗ್ರಾಮಸ್ಥರು ಸಹ ಕೈಜೋಡಿಸಬೇಕು ಎಂದರು.

ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಖುಶ್ವಂತ್, ಜಿ.ಪಂ. ಸಹಾಯಕ ಅಭಿಯಂತರ ಲಖನ್ ಸಿಪಾನಿ, ಬಿಜೆಪಿ ಮುಖಂಡರಾದ ಪ್ರದೀಪ್, ಸುದೀಶ್, ಪರಮೇಶ್, ಕಾವಿ ಬಸಪ್ಪ, ವಿಜಯ್, ಪ್ರದೀಪ್, ಸುದೀಪ್, ಅಗ್ರಹಾರ ಸರ್ಕಾರಿ ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ವಸಂತ್, ಕುಡುಗರಹಳ್ಳಿ ಸರ್ಕಾರಿ ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಅಚ್ಚು ಮತ್ತಿತರರು ಹಾಜರಿದ್ದರು.

## ಯುವಕರಲ್ಲಿ ಸಾಹಿತ್ಯಾಭಿರುಚಿ ಮೂಡಿಸುವ ಕೆಲಸವಾಗಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಪ್ರಸ್ತುತ ದಿನಗಳಲ್ಲಿ ಯುವ ಜನರು ಸಾಹಿತ್ಯ ಚಟುವಟಿಕೆಗಳಿಂದ ದೂರ ಸರಿಯುತ್ತಿದ್ದು ಅವರಲ್ಲಿ ಓದಿನ ಅಭಿರುಚಿ ಮೂಡಿಸುವ ಕೆಲಸ ಆಗಬೇಕಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಎಚ್.ಎಲ್.ಮಲ್ಲೇಶ್ ಗೌಡ ಹೇಳಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿ ಹಾಗೂ ಸಾಹಿತ್ಯ ವಿಚಾರ ವೇದಿಕೆಯಿಂದ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಚಕೋರ ಚಿಂತನ ಮಾಲಿಕೆ ಕಾರ್ಯಕ್ರಮದಲ್ಲಿ ಮಾತನಾಡಿ, ಕರ್ನಾಟಕ ಸಾಹಿತ್ಯ ಅಕಾಡೆಮಿಯು ಯುವ ಜನರಲ್ಲಿ ಸಾಹಿತ್ಯದ ಅಭಿರುಚಿ ಹೆಚ್ಚಿಸುವ ಕೆಲಸವನ್ನು ಪರಿಣಾಮಕಾರಿಯಾಗಿ ಮಾಡುತ್ತಿದೆ. ಇಂತಹ ಚಿಂತನೆಗಳು ಹೆಚ್ಚಬೇಕು. ಪ್ರಸ್ತುತ ದಿನಗಳಲ್ಲಿ ಸಾಹಿತ್ಯವೆಂದರೆ ನಿರಾಸಕ್ತಿ ತೋರುವವರ ಸಂಖ್ಯೆ ಹೆಚ್ಚುತ್ತಿದೆ.

ಕಥೆ, ಕಾದಂಬರಿ, ಕವನಗಳ ಓದುವುದರಿಂದ ಭಾಷಾ ಪ್ರೌಢಿಮೆ ಹೆಚ್ಚುವುದು ಮಾತ್ರವಲ್ಲದೆ ವ್ಯಕ್ತಿತ್ವ ವಿಕಸನವೂ ಆಗುತ್ತದೆ. ಕನ್ನಡ ಭಾಷೆಯ ಸೊಬಗು ಅರಿಯಲು ಓದುವ ಹವ್ಯಾಸವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಲೇಖಕಿ ಹಾಗು ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಸಂಚಾಲಕಿ ಹೆಚ್.ಆರ್.ಸುಜಾತಾ ಮಾತನಾಡಿ, ಸುತ್ತಲು ನಡೆಯುವ ಅನೇಕ ಸಂಗತಿಗಳನ್ನು ನಾವು ಗಮನಿಸುವುದಿಲ್ಲ. ಸಾಹಿತಿಗಳ ಬರಹದಲ್ಲಿ




ಮಾತ್ರ ಅಂತಹ ಸೂಕ್ಷ್ಮತೆಗಳನ್ನು ಕಾಣಬಹುದಾಗಿದೆ. ಯಾವ ಒಂದು ವಸ್ತು ವಿಷಯದ ಕುರಿತು ಆಳವಾಗಿ ಅರಿಯಲು ಸಾಹಿತ್ಯ ನೆರವಾಗುತ್ತದೆ. ವಿದ್ಯಾರ್ಥಿಗಳು ಪಠ್ಯಪುಸ್ತಕ ಅಧ್ಯಯನದ ಜೊತೆಗೆ ಸಾಹಿತ್ಯದತ್ತ ಆಸಕ್ತಿ ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು.

ಗಾಂಧಿ ಮಾರ್ಗದಲ್ಲಿ ನಮ್ಮವರುಟಿ ವಿಷಯ ಕುರಿತು ಮಾತನಾಡಿದ ಗೊರೂರು ಶಿವೇಶ್, ಮಹಾತ್ಮ ಗಾಂಧೀಜಿ ಅವರ ತತ್ವಾದರ್ಶಗಳಿಂದ ಪ್ರೇರಿತರಾಗಿ ಸ್ವಾತಂತ್ರ್ಯ ಚಳವಳಿಯಲ್ಲಿ ಧುಮುಕಿದ ಜಿಲ್ಲೆಯ ಅನೇಕರನ್ನು ನಾವು ಕಾಣಬಹುದು. ಗೊರೂರು ರಾಮಸ್ವಾಮಿ ಅಯ್ಯಂಗಾರ್, ಎಸ್.ಕೆ.ಕರೀಂಖಾನ್, ಡಾ. ಎಸ್.ಎಲ್.ಭೈರಪ್ಪ ಅವರು ವಿದ್ಯಾರ್ಥಿ ಹಂತದಲ್ಲೇ ಗಾಂಧೀಜಿ ಅವರ ಚಿಂತನೆಗಳಿಗೆ ಮನಸೋತವರು. ಗೊರೂರು ರಾಮಸ್ವಾಮಿ ಅಯ್ಯಂಗಾರ್ ಅವರು ಬಾಲ್ಯದಲ್ಲೇ ವ್ಯಾಸಂಗ ಮೊಟಕುಗೊಳಿಸಿ ಗಾಂಧೀಜಿ ಅವರೊಂದಿಗೆ ಸಾಬರಮತಿ ಆಶ್ರಮಕ್ಕೆ ತೆರಳಿದರು. ಹೆಚ್ಚಿನ ವಿದ್ಯಾಭ್ಯಾಸ ಇಲ್ಲದಿದ್ದರೂ ಆಸಕ್ತಿಯಿಂದ ಓದಿನ ಗೀಳು ಬೆಳೆಸಿಕೊಂಡ ಅವರು ಗಾಂಧೀಜಿಯ ಸತ್ಯಾನ್ವೇಷಣೆ ಕೃತಿ ಅನುವಾದ ಮಾಡಿ ಪ್ರಖ್ಯಾತರಾದರು. ಅವರು ಪದವೀಧರರಾಗಿ ಏನು ಸಾಧಿಸುತ್ತಿದ್ದರೋ ಅದಕ್ಕಿಂತ ಹೆಚ್ಚಿನದನ್ನು ಸಾಹಿತ್ಯದಿಂದ ಗಳಿಸಿದರು ಎಂದರು.

ಅಫ್ಘಾನಿಸ್ತಾನ್ ಮೂಲದಿಂದ ಬಂದ ಎಸ್.ಕೆ.ಕರೀಂ ಖಾನ್ ಅವರು ಸಕಲೇಶಪುರದಲ್ಲಿ ನೆಲೆಸಿ ಮಲೆನಾಡ ಗಾಂಧಿ ಎನಿಸಿಕೊಂಡರು. ನಟವರ ಗಂಗಾಧರ ಎಂಬ ಹಾಡು ರಚಿಸಿ ಜನಮನ್ನಣೆ ಗಳಿಸಿದರು. ಹಲವು ವರ್ಷಗಳ ಕಾಲ ಈ ಹಾಡು ಚಲನಚಿತ್ರ ಮಂದಿರ ಹಾಗು ನಾಟಕ ಮಂಡಳಿಗಳಲ್ಲಿ ಪ್ರಸಾರವಾಗುತ್ತಿತ್ತು. ಕರೀಂಖಾನ್ ಮುಸ್ಲಿಂ ವ್ಯಕ್ತಿಯಾಗಿದ್ದರೂ ಅವರಿಗೆ ಧರ್ಮ, ಜಾತಿ ಯಾವತ್ತಿಗೂ ತೊಡಕಾಗಲಿಲ್ಲ. ಅದೇ ರೀತಿ ಎಸ್.ಎಲ್.ಭೈರಪ್ಪನವರು ಸಹ ಸಾಹಿತ್ಯದಲ್ಲಿ ಗುರುತರ ಸಾಧನೆ ಮಾಡಿದ್ದಾರೆ. ಅವರ ಕೃತಿಗಳು ಹಲವು ಮರು ಮುದ್ರಣಗಳನ್ನು ಕಂಡಿರುವುದು ಮಾತ್ರವಲ್ಲದೆ ವಿದೇಶಿ ಭಾಷೆಗಳಿಗೂ ಅನುವಾದವಾಗಿರುವುದು ಕನ್ನಡದ ಸಿರಿವಂತಿಕೆಗೆ ಸಾಕ್ಷಿ ಎಂದರು.

ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ ಕಾರ್ಯಕ್ರಮ ಉದ್ಘಾಟಿಸಿದರು. ಬೆಸ್ಟ್ ಕಾಲೇಜು ಪ್ರಾಂಶುಪಾಲ ನವೀನ್ ಅಧ್ಯಕ್ಷತೆ ವಹಿಸಿದ್ದರು.

## ಚಿತ್ರಕಲಾ ಸ್ಪರ್ಧೆ: ರಾಜ್ಯ ಮಟ್ಟಕ್ಕೆ ಆಯ್ಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಬಾಗೆ ಜೆಎಸ್‌ಎಸ್ ಶಾಲೆಯ 8ನೇ ತರಗತಿ ವಿದ್ಯಾರ್ಥಿನಿ ಯುವಿಕ ಚಿತ್ರಕಲೆ ಸ್ಪರ್ಧೆಯಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಬೆಂಗಳೂರಿನ ಬಾಲಭವನ ಸೊಸೈಟಿ, ಹಾಸನ ಜಿಲ್ಲಾ ಪಂಚಾಯಿತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಹಾಸನದ ಹಾಸನಾಂಬ ಕಲಾಕ್ಷೇತ್ರದಲ್ಲಿ ನಡೆಸಿದ ಜಿಲ್ಲಾ ಮಟ್ಟದ ಚಿತ್ರಕಲೆ ಸ್ಪರ್ಧೆಯಲ್ಲಿ 8ನೇ ತರಗತಿ ವಿದ್ಯಾರ್ಥಿನಿ ಯವಿಕ ದ್ವಿತೀಯ ಸ್ಥಾನ ಪಡೆದಿದ್ದಾರೆ. ಕುನಿಗನಹಳ್ಳಿ ಗ್ರಾಮ ಪಂಚಾಯಿತಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹೆಚ್.ಆರ್.ಗಿರೀಶ್ ಕುಮಾರ ಅವರ ಮಗಳು ಯುವಿಕಗೆ ಪ್ರಾಂಶುಪಾಲ ಮಧುಕುಮಾರ್ ಹಾಗೂ ಚಿತ್ರಕಲೆ ಶಿಕ್ಷಕ ಶ್ರೀಧರ್ ಅಭಿನಂದಿಸಿದ್ದಾರೆ.




## ಹೃದಯಾಘಾತದಿಂದ ಪಿಎಸ್‌ಐ ನಿಧನ



ಹೊಳೆನರಸೀಪುರ: ಗ್ರಾಮಾಂತರ ಠಾಣೆಯ ಅಪರಾಧ ವಿಭಾಗದ ಪಿಎಸ್‌ಐ ಶಿವಲಿಂಗಪ್ಪ (59) ಬುಧವಾರ ಹೃದಯಾಘಾತದಿಂದ ನಿಧನರಾದರು. ಅರಕಲಗೂಡು ತಾಲ್ಲೂಕು ರಾಮನಾಥಪುರ ಹೋಬಳಿ ಮಲ್ಲರಾಜಪಟ್ಟಣದ ಸ್ವಗೃಹದಲ್ಲಿ ಹಠಾತ್ ಹೃದಯಾಘಾತದಿಂದ ನಿಧನರಾದರು. ಮೃತರಿಗೆ ಪತ್ನಿ, ಇಬ್ಬರು ಹೆಣ್ಣು ಮಕ್ಕಳು ಮತ್ತು ಒಬ್ಬ ಪುತ್ರ ಇದ್ದಾರೆ. 1993ರಿಂದ ಕೊಡಗು ಜಿಲ್ಲೆಯ ವಿವಿಧ ಭಾಗಗಳಲ್ಲಿ ಕರ್ತವ್ಯ ನಿರ್ವಹಿಸಿ ಕಳೆದ ವರ್ಷ ಸೋಮವಾರಪೇಟೆ ಠಾಣೆಯಿಂದ ವರ್ಗಾವಣೆಗೊಂಡು ಹೊಳೆನರಸೀಪುರದಲ್ಲಿ ಸೇವೆ ಸಲ್ಲಿಸುತ್ತಿದ್ದರು. ಇಲಾಖೆಯ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಮತ್ತು ಬಂಧು ಮಿತ್ರರು ಮೃತರ ಆತ್ಮಕ್ಕೆ ಶಾಂತಿ ಕೋರಿದ್ದಾರೆ.

# ಕೃಷಿ ನೀತಿ ಬದಲಾಗದಿದ್ದರೆ ರೈತರಿಗೆ ಲಾಭವಿಲ್ಲ

## ಅನ್ನದಾತರು ಹಿಂದುಳಿಯಲು ಸರ್ಕಾರಗಳೇ ಕಾರಣ | ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ರಂಗಸ್ವಾಮಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕೃಷಿ ನೀತಿಗಳನ್ನು ಸರಿಯಾಗಿ ರೂಪಿಸಿದರೆ ದೇಶದ ಯಾವ ರೈತನು ಬಡತನದಿಂದ ಇರಲಾರರು, ನಮ್ಮ ದೇಶದ ಕೃಷಿ ನೀತಿಗಳೇ ರೈತರನ್ನು ಬಡವರನ್ನಾಗಿ ಮಾಡಿದೆ ಎಂದು ಪ್ರಗತಿಪರ ಕೃಷಿಕ ಹಾಗೂ 2025ನೇ ಸಾಲಿನ ಕನ್ನಡ ರಾಜ್ಯೋತ್ಸವ ರಾಜ್ಯ ಪ್ರಶಸ್ತಿ ಪುರಸ್ಕೃತ ಡಾ. ಎಂ.ಸಿ. ರಂಗಸ್ವಾಮಿ ಅಭಿಪ್ರಾಯಪಟ್ಟರು.

ಅರಕಲಗೂಡು ತಾಲೂಕಿನ ದೊಡ್ಡ ಮಗ್ಗೆ ಗ್ರಾಮದ ಮಗ್ಗೆ ಮನೆ ಆವರಣದಲ್ಲಿ ರೋಟರಿ ಕ್ಲಬ್ ಆಫ್ ಹಾಸನ ರಾಯಲ್, ಎಂ.ಜಿ. ರಸ್ತೆ ಹಾಗೂ ಆರ್.ಸಿ. ರಸ್ತೆ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪತ್ರಿಕೋದ್ಯಮ ವಿಭಾಗದ ವತಿಯಿಂದ ಹಮ್ಮಿಕೊಂಡಿದ್ದ ಕೃಷಿ ಅಧ್ಯಯನ ಶಿಬಿರ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿ, ನಮ್ಮ ದೇಶದಲ್ಲಿ ರೈತರು ಬೆಳೆದ ಬೆಳೆಗಳಿಗೆ ಹೊರ ರಾಷ್ಟ್ರಗಳಲ್ಲಿ ಅತ್ಯುತ್ತಮ ಬೇಡಿಕೆ ಇದ್ದು, ಆಳ್ವಿಕೆ ಮಾಡುವ ಸರ್ಕಾರಗಳು ರೈತರ ಪರವಾದ ಸೂಕ್ತ ನೀತಿಗಳನ್ನು





ರೂಪಿಸಿದರೆ ಪ್ರತಿಯೊಬ್ಬ ರೈತನು ಕೃಷಿಯಲ್ಲಿ ಆರ್ಥಿಕ ಸದೃಢರಾಗಬಹುದು. ಕೃಷಿ ಕ್ಷೇತ್ರ ಇಂದು ಯಾರಿಗೂ ಬೇಡವಾದ ಕ್ಷೇತ್ರವಾಗಿದ್ದು, ಅದರಲ್ಲೂ ಯುವ ಸಮೂಹ ಕೃಷಿಯನ್ನು ಸಂಪೂರ್ಣ ನಿರ್ಲಕ್ಷ್ಯ ಮಾಡಿದೆ. ಎಷ್ಟೇ ವಿದ್ಯಾವಂತರಾದರು ಪೋಷಕರು ಸಂಪಾದಿಸಿರುವ ಕಡಿಮೆ ಅಥವಾ ಮಧ್ಯಮ ವರ್ಗದ ಜಮೀನಿನಲ್ಲೇ ಇಂದು ಕೃಷಿ ಮಾಡಿದರೆ ಲಾಭ ಮಾಡಬಹುದಾಗಿದೆ.

### ಮಹಿಳೆಯರು ಕೃಷಿ ಆಸಕ್ತಿ ಬೆಳೆಸಿಕೊಳ್ಳಿ

ಯುವತಿಯರಿಗೆ ಕೃಷಿ ಕ್ಷೇತ್ರದಲ್ಲಿ ಅಧಿಕ ಮಟ್ಟದ ಸೌಲಭ್ಯಗಳಿದ್ದು, ಯುವತಿಯರು ಸ್ವಾವಲಂಬಿಗಳಾಗಿ ಬದುಕಲು ಕೃಷಿ ಕ್ಷೇತ್ರ ಅತ್ಯಂತ ಉತ್ತಮವಾಗಿದೆ. ಹೈನುಗಾರಿಕೆಯಿಂದ ಹಿಡಿದು ಪ್ರತಿಯೊಂದು ಕೃಷಿ ಕಾಯಕದಲ್ಲೂ ಸರ್ಕಾರ ಸಬ್ಸಿಡಿ ರೂಪದಲ್ಲಿ ಸೇರಿದಂತೆ ಇನ್ನು ಹಲವು ಸೌಲಭ್ಯಗಳಿವೆ ಎಂದರು.

ಕೃಷಿ ಕಾಯಕದಲ್ಲಿ ಮಹಿಳೆಯರ ಪಾತ್ರವೇ ಅತೀ ಮುಖ್ಯವಾಗಿದ್ದು, ಸ್ತ್ರೀಯರು ಕೃಷಿ ಕಾಯಕದ ಜೊತೆ ಕೃಷಿ ಕಾರ್ಯಗಳ ನಿರ್ವಹಣೆಯಲ್ಲಿ ಪಾಲ್ಗೊಂಡರೆ ಯಶಸ್ಸು ಸಾಧ್ಯ. ಕೃಷಿ ಪ್ರಧಾನ ಈ ರಾಷ್ಟ್ರದಲ್ಲಿ ಸ್ತ್ರೀಯರಿಂದಾಗಿಯೇ ಕೃಷಿ ಕಾರ್ಯಗಳು ಇನ್ನು ಜೀವಂತವಾಗಿದೆ ಎಂದರೆ ತಪ್ಪಾಗಲಾರದು. ಪುರುಷರು ಕೃಷಿ ಚಟುವಟಿಕೆಯಲ್ಲಿ ಸಂಪೂರ್ಣವಾಗಿ ತೊಡಗಿಕೊಳ್ಳುವುದು ಕಮ್ಮಿ, ಕೇವಲ ನಿರ್ವಹಣೆಯಲ್ಲಿ ಕಾಲ ಕಳೆಯುತ್ತಾರೆ. ತಾವು ಬೆಳೆದ ಬೆಳೆಯನ್ನು ಮಾರಾಟ ಮಾಡಲು ಆಗದೆ ಸಿಕ್ಕಷ್ಟು ಹಣಕ್ಕೆ ಬೆಳೆಯನ್ನು ಮಾರಾಟ ಮಾಡಿ ನಷ್ಟ ಹೊಂದುತ್ತಿದ್ದಾರೆ. ಬೆಳೆಯನ್ನು ಸಂಗ್ರಹಣೆ, ಮಾರುಕಟ್ಟೆಯ ಬಗೆಗಿನ ಜ್ಞಾನ ಸೇರಿದಂತೆ ಈ ತರನಾದ ಜ್ಞಾನದೆಡೆಗೆ ಒತ್ತು ನೀಡಿದರೆ ಬೆಳೆಗಳಿಗೆ ಉತ್ತಮ ಹಣ ಪಡೆದುಕೊಳ್ಳಬಹುದಾಗಿದೆ. ಹಾಗಾಗಿಯೇ ಹೆಣ್ಣು ಮಕ್ಕಳು ಕೃಷಿಯಲ್ಲಿ ನಿರ್ವಹಣೆಯ ಬಗ್ಗೆ ತಿಳಿದುಕೊಂಡರೆ ಹೆಚ್ಚು ಅನುಕೂಲವಾಗಲಿದ್ದು, ಶಿಕ್ಷಣದೊಂದಿಗೆ ಕೃಷಿ ಮಾಡುವ ಮನಸ್ಥಿತಿಯನ್ನು ಮೈಗೂಡಿಸಿಕೊಂಡರೆ ಜೀವನದಲ್ಲಿ ಯಶಸ್ಸು ಕಾಣಲು ಸಾಧ್ಯ ಎಂದು ಹೇಳಿದರು.

### ರೈತರ ಮದುವೆಯಾಗಲು ಹಿಂದೇಟು

ರೋಟರಿ ಕ್ಲಬ್ ಆಫ್ ಹಾಸನ ರಾಯಲ್ ಅಧ್ಯಕ್ಷ ಹಾಗೂ ಟೈಮ್ಸ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಬಿ.ಕೆ.ಗಂಗಾಧರ್ ಮಾತನಾಡಿ, ಯುವತಿಯರು ರೈತರನ್ನು ಮದುವೆಯಾಗಲು ಹಿಂಜರಿಯುತ್ತಾರೆ. ಅಂತಹ ಸ್ಥಿತಿಗೆ ಕೃಷಿ ಕ್ಷೇತ್ರ ಬಂದು ನಿಂತಿದೆ. ಯಾವ ಕ್ಷೇತ್ರದಲ್ಲಾದರೂ ಯಶಸ್ಸು ಕಾಣಬಹುದು ಆದರೇ ಕೃಷಿ ಕ್ಷೇತ್ರದಲ್ಲಿ ಯಶಸ್ಸು ಕಾಣುವುದು ಅಷ್ಟು ಸುಲಭದ ಮಾತಲ್ಲ. ನಮ್ಮೊಳಗೆ ಇದ್ದು, ಇಷ್ಟೆಲ್ಲ ಸಾಧನೆ ಮಾಡಿದರು ಏನನ್ನು ಹೇಳಿಕೊಳ್ಳದೆ ಬಹಳ ಸರಳವಾಗಿ ಬದುಕುತ್ತಿರುವ ಡಾ.ಎಂ.ಸಿ. ರಂಗಸ್ವಾಮಿ ಅವರು ಯುವ ಸಮುದಾಯಕ್ಕೆ ದೊಡ್ಡ ಆದರ್ಶ ವ್ಯಕ್ತಿಯಾಗಿ ಕಾಣುತ್ತಾರೆ. ನೈಸರ್ಗಿಕವಾಗಿ ನಿರ್ದಿಷ್ಟವಾದ ಪ್ರದೇಶದಲ್ಲಿ ಬೆಳೆಯುತಿದ್ದ ಬೆಳೆಗಳನ್ನು ಯಾವುದೇ ಭಾಗದಲ್ಲಾದರೂ ಬೆಳೆಯಬಹುದು ಎಂದು ತೋರಿಸಿಕೊಟ್ಟಿದ್ದಾರೆ. ಬೆಂಗಳೂರಿನ ಜಿಕೆವಿಕೆ ಯಂತಹ ಪ್ರತಿಷ್ಟಿತ ಸಂಸ್ಥೆಯಲ್ಲಿ ಗೌರವ ಡಾಕ್ಟರೇಟ್ ಪಡೆಯುವುದು ಅಷ್ಟು ಸುಲಭವಲ್ಲ ಅದರಲ್ಲೂ ಕ್ಷೇತ್ರಕ್ಕೆ ಪಡೆಯುವುದು ಸುಲಭದ ಮಾತಲ್ಲ. ಹೀಗಿರುವಾಗ ರಂಗಸ್ವಾಮಿ ಅವರು ಕೃಷಿ ಕ್ಷೇತ್ರಕ್ಕೆ ಅದೇ ಸಂಸ್ಥೆ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿದೆ. ಈ ವರ್ಷ ರಾಜ್ಯೋತ್ಸವ ಪ್ರಶಸ್ತಿ ಕೂಡ ದೊರೆತಿದೆ. ಅಂದರೇ ನಾವುಗಳು ಅರ್ಥ ಮಾಡಿಕೊಳ್ಳಬೇಕಾದ ಸಂಗತಿ ಅಂದರೆ ನಾವುಗಳು ಮಾಡುವ ಕೆಲಸದಲ್ಲಿ ಶ್ರದ್ಧೆ, ಪರಿಶ್ರಮ, ಪ್ರಾಮಾಣಿಕತೆಯಿಂದ ದುಡಿದು ಸರಳವಾಗಿ ಬದುಕಿದರೆ ಎಂತಹ ಪ್ರಶಸ್ತಿಗಳು ಆರಿಸಿ ಬರುತ್ತವೆ ಎಂಬುದಕ್ಕೆ ರಂಗಸ್ವಾಮಿ ನಿದರ್ಶನವಾಗಿದ್ದು, ಅವರ ಕೆಲಸಕ್ಕೆ ಪದ್ಮಶ್ರೀ, ವಿಭೂಷಣ ದಂತಹ ಪ್ರಶಸ್ತಿಗಳು ದೊರೆಯಲಿ. ಕೃಷಿಯಲ್ಲಿ ಏನು ಇಲ್ಲ ಎಂಬುವವರು ರಂಗಸ್ವಾಮಿ ಅವರ ಕೃಷಿ ಕಾಯಕವನ್ನು ಒಮ್ಮೆ ಬಂದು ನೋಡಿ ಅವರನ್ನು ಮಾದರಿಯಾಗಿ ತೆಗೆದುಕೊಂಡರೆ ಸಾಕು ಎಂದರು.

ಎಂ.ಜಿ. ರಸ್ತೆ ಮಹಿಳಾ ಕಾಲೇಜಿನ ಪ್ರಾಂಶುಪಾಲೆ ಡಾ.ಕೆ.ಜಿ. ಕವಿತಾ, ಆರ್.ಸಿ. ರಸ್ತೆ ಮಹಿಳಾ ಕಾಲೇಜಿನ ಪ್ರಾಂಶುಪಾಲ ಡಿ.ಕೆ. ಮಂಜಯ್ಯ, ಅಧ್ಯಾಪಕರಾದ ಜಿ.ಆರ್. ಮೋಹನ್, ನಂದನ್, ಮನೋಹರ್, ಯೋಗೇಶ್, ಉಪನ್ಯಾಸಕರಾದ ದಿಲೀಪ್ ಕುಮಾರ್, ರವಿಕುಮಾರ್, ಕಾವ್ಯ, ರೋಟರಿ ಸಹಾಯಕ ಗೌರ್ವನರ್ ಮಂಜುನಾಥ್, ರೋಟರಿ ರಾಯಲ್‌ನ ಸದಸ್ಯ ಸಚಿನ್, ಚೇತನ್ ಹಾಗೂ ಇತರರು ಹಾಜರಿದ್ದರು.

## ಹೊಯ್ಸಳೇಶ್ವರ ರಥೋತ್ಸವ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಳೇಬೀಡು: ಹೊಯ್ಸಳೇಶ್ವರ ದೇವಾಲಯದ ಕಾರ್ತಿಕೋತ್ಸವ ಹಾಗೂ ರಥೋತ್ಸವ ವೈಭವದಿಂದ ನೆರವೇರಿತು.

ಸಾಮೂಹಿಕ ಪೂಜೆ ನೆರವೇರಿಸಿದ ನಂತರ ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿಗಳನ್ನು ಕರೆತಂದು ರಥದಲ್ಲಿ ಆರೋಹಣ ಮಾಡಲಾಯಿತು. ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಚಾಲನೆ ನೀಡಿದ ನಂತರ ರಥ ಎಳೆಯಲಾಯಿತು. ಶಾಲಾ, ಕಾಲೇಜು ವಿದ್ಯಾರ್ಥಿಗಳು ರಥವನ್ನು ಎಳೆದು ಪುನೀತರಾದರು.

ಮೆರವಣಿಗೆಯ ವೈಭವ ಹೆಚ್ಚಿಸಲು ಕನ್ನಡ ಸಂಸ್ಕೃತಿ ಇಲಾಖೆಯಿಂದ ವಿವಿಧ ಕಲಾ ತಂಡಗಳನ್ನು ಆಯೋಜಿಸಲಾಗಿತ್ತು. ಗೊಂಬೆ ಹೊತ್ತವರು ರಸ್ತೆಯ ಇಕ್ಕೆಲಗಳಲ್ಲಿ ನಿಂತಿದ್ದ ಜನರಿಗೆ ಹಾಸ್ಯ ಮಾಡುತ್ತಾ ಸಾಗಿದರು. ಡೊಳ್ಳು ಕುಣಿತ ಹಾಗೂ ವಿವಿಧ ವಾದ್ಯ ತಂಡಗಳು ರಥೋತ್ಸವಕ್ಕೆ ಕಳೆ ನೀಡಿದವು.

ಆಗಮಿಕ ಅರ್ಚಕರು ಪೂಜೆ ನೆರವೇರಿಸಿದ ನಂತರ ವಿಶ್ವಕರ್ಮ ಸಮಾಜದವರು ಕದಳಿ ಬಲಿ ಸಮರ್ಪಿಸಿದರು.

ರಥದ ಉತ್ಸವ ಹೊಯ್ಸಳೇಶ್ವರ ದೇವಾಲಯದ ಹೊರ ಆವರಣಕ್ಕೆ ಬಂದು ನಿಂತಿತು. ಭಕ್ತರು ರಥದ ಬಳಿಗೆ ಬಂದು ಪಾರ್ವತಿ ಪರಮೇಶ್ವರ ದರ್ಶನ ಮಾಡಿ, ಹಣ್ಣುಕಾಯಿ ಪೂಜೆ ಮಾಡಿಸಿದರು. ಮುಖವಾಡ ನಾಗಾಭರಣದೊಂದಿಗೆ ಹೊಯ್ಸಳೇಶ್ವರ ಲಿಂಗಕ್ಕೆ ವಿಶೇಷ ಅಲಂಕಾರ ಮಾಡಲಾಗಿತ್ತು. ಗರ್ಭಗುಡಿಯ ಹೊಯ್ಸಳೇಶ್ವರ ಸ್ವಾಮಿಯನ್ನು ಸ್ಥಳೀಯ ಭಕ್ತರು ಮಾತ್ರವಲ್ಲದೆ ದೂರದಿಂದ ಆಗಮಿಸಿದ ಭಕ್ತರು ದರ್ಶನ ಮಾಡಿದರು.

ಮಾಜಿ ಶಾಸಕ ಕೆ.ಎಸ್.ಲಿಂಗೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಎಚ್.ಆರ್.ಮಧು, ಉಪಾಧ್ಯಕ್ಷೆ ಸುಮಾ ವೆಂಕಟೇಶ್, ಸದಸ್ಯರಾದ ಸಿ.ಆರ್.ಲಿಂಗಪ್ಪ ಪ್ರೇಮಣ್ಣ, ಗೀತಾ ಅರುಣ್, ನಿಂಗಪ್ಪ, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ.ಕೆ.ಹುಲೀಗೌಡ, ರಥೋತ್ಸವ ಸಮಿತಿ ಕಾರ್ಯದರ್ಶಿ ಎಂ.ಸಿ.ಕುಮಾರ್, ನಿರ್ದೇಶಕರಾದ ಬಿ.ಎಂ.ಮಲ್ಲಿಕಾರ್ಜುನ, ಎಚ್.ಪರಮೇಶ್, ಕೆ.ಎಂ.ವೀರಣ್ಣ, ರಘುನಾಥ್ ಭಾಗವಹಿಸಿದ್ದರು.

## ಪೌರ ಕಾರ್ಮಿಕರ ವಸತಿ ಹಣ ದುರುಪಯೋಗ: ಡಿ.ಸಿ. ಸಣ್ಣಸ್ವಾಮಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಕಲೇಶಪುರ ಪಟ್ಟಣದಲ್ಲಿ ಕಳೆದ 8 ವರ್ಷಗಳ ಹಿಂದೆ ಪೌರಕಾರ್ಮಿಕರಿಗಾಗಿ 14 ಕೋಟಿ ರೂ. ಅನುದಾನದಲ್ಲಿ ಆರಂಭವಾದ ನಿವೇಶನ ಕಟ್ಟಡದ ಕಾಮಗಾರಿ ನನೆಗುದಿಗೆ ಬಿದ್ದಿದ್ದು, ಯೋಜನೆಯಲ್ಲಿ ಭಾರೀ ಅವ್ಯವಹಾರ ಆಗಿದೆ ಎಂದು ಜಿಲ್ಲಾ ಕಾಂಗ್ರೆಸ್ ವಕ್ತಾರ ಡಿ.ಸಿ. ಸಣ್ಣಸ್ವಾಮಿ ಆರೋಪಿಸಿದ್ದಾರೆ.

ಪಟ್ಟಣದ ಕುಶಾಲನಗರ ಬಡಾವಣೆಯ 45 ಕುಟುಂಬಗಳ ವಸತಿ ಸಮಸ್ಯೆಗೆ ಪರಿಹಾರ ಕಲ್ಪಿಸಲು ಕೊಳಚೆ ನಿರ್ಮೂಲನ ಮಂಡಳಿಯಿದ ವಸತಿ ಯೋಜನೆ ಘೋಷಿಸಲಾಯಿತು. 2018-2019ನೇ ಸಾಲಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ 14 ಕೋಟಿ ರೂ. ಅನುದಾನದಲ್ಲಿ ಪೌರ ಕಾರ್ಮಿಕರಿಗಾಗಿ ಪ್ರಾರಂಭವಾದ ನಿವೇಶನ ಕಟ್ಟಡದ ಕಾಮಗಾರಿ ಇನ್ನೂ ಸಹ ನನೆಗುದಿಗೆ ಬಿದ್ದಿದ್ದು, ಪೌರಕಾರ್ಮಿಕರು ಇನ್ನಿಲ್ಲದ ಸಂಕಷ್ಟ ಎದುರಿಸುತ್ತಿದ್ದಾರೆ ಎಂದು



ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಕಾಮಗಾರಿ ವಿಳಂಬಕ್ಕೆ ಹಲವು ಕಾರಣ: ಆರ್ಥಿಕವಾಗಿ ಸದೃಢರಾಗಿದ್ದ 21 ಫಲಾನುಭವಿಗಳಿಗೆ ಮನೆ ನಿರ್ಮಾಣ ಮಾಡಬೇಕು ಎಂದು ರಾಜಕೀಯ ಒತ್ತಡಕ್ಕೆ ಮಣಿದು ತೀರ್ಮಾನಿಸಲಾಯಿತು. ಅದಕ್ಕೆ ಸಾರ್ವಜನಿಕರು ವಿರೋಧ ವ್ಯಕ್ತಪಡಿಸಿದ ನಂತರ ಉಳ್ಳವರ ಪಾಲಾಗಿದ್ದ ನಿವೇಶನ ಕಾಮಗಾರಿ ಸ್ಥಗಿತಗೊಂಡವು. ಅದಕ್ಕೆ 2018-19ನೇ ಸಾಲಿನ ಜನಪ್ರತಿನಿಧಿ ಕೂಡ ಕಾರಣಕರ್ತರು. 14 ಕೋಟಿ ರೂ. ಅನುದಾನದಲ್ಲಿ ಗುತ್ತಿಗೆದಾರನ ಹಣದ ದುರಾಸೆ ಹಾಗೂ ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಪುರಸಭೆಯ ಸದಸ್ಯರು ಹಾಗೂ ಅಧಿಕಾರಿಗಳೂ ಈ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳದಿರುವುದು ಇದಕ್ಕೆ ಪ್ರಮುಖ ಕಾರಣ ಎಂದು ಆರೋಪಿಸಿದ್ದಾರೆ.

## ಬಸವೇಶ್ವರ ಸ್ವಾಮಿ ದೇಗುಲಕ್ಕೆ 5 ಲಕ್ಷ ರೂ. ಅನುದಾನ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಶ್ರೀ ಬಸವೇಶ್ವರ ದೇವಾಲಯ ನಿರ್ಮಾಣಕ್ಕೆ 5 ಲಕ್ಷ ರೂ. ಅನುದಾನ ನೀಡಲಾಗುವುದು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ನಾಗೇನಹಳ್ಳಿ ಗ್ರಾಮದಲ್ಲಿ ನಿರ್ಮಾಣಗೊಳ್ಳುತ್ತಿರುವ ಶ್ರೀ ಬಸವೇಶ್ವರ ದೇವಸ್ಥಾನದ ಗರ್ಭಗುಡಿಯ ಬಾಗಿಲು ಪ್ರತಿಷ್ಠಾಪನೆ ಅಂಗವಾಗಿ ನಡೆದ ಪೂಜಾ ಕಾರ್ಯಕ್ರಮದಲ್ಲಿ ಮಾತನಾಡಿ, ಈಗಾಗಲೇ ದೇವಾಲಯ ನಿರ್ಮಾಣಕ್ಕೆ 2 ಲಕ್ಷ ರೂ. ನೀಡಲಾಗಿದ್ದು ಮುಂಬರುವ ದಿನಗಳಲ್ಲಿ 5 ಲಕ್ಷ ರೂ. ಅನುದಾನ ನೀಡಲಾಗುವುದು ಎಂದು ಭರವಸೆ ನೀಡಿದರು.

ಗ್ರಾಮದಲ್ಲಿ ಈಗಾಗಲೇ ರಸ್ತೆ ಒಳಚರಂಡಿ ಸೇರಿದಂತೆ ವಿವಿಧ ಅಭಿವೃದ್ಧಿ ಕೆಲಸಗಳಿಗೆ ಹೆಚ್ಚಿನ ಅನುದಾನ ನೀಡಲಾಗಿದೆ ಎಂದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಕ್ಷೇತ್ರ ಅಭಿವೃದ್ಧಿಗೆ ಅನುದಾನ ದೊರೆಯುತ್ತಿಲ್ಲ.

ಅದರಿಂದ ತಾಲೂಕಿನ ಅಭಿವೃದ್ಧಿಗೆ ತೊಡಕಾಗಿದ್ದು ಈ ಬಗ್ಗೆ ರಾಜ್ಯ ಸರ್ಕಾರ ಗಮನ ಹರಿಸಬೇಕಿದೆ ಎಂದು ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸುಜಾತ ನಾಗೇಂದ್ರ, ಉಪಾಧ್ಯಕ್ಷ ಕೆ.ಎ. ಸತೀಶ್, ಮುಖಂಡರಾದ ಕೆ.ಟಿ. ನಟೇಶ್, ರವಿಶಂಕರ್, ಉದ್ಯಮಿಗಳಾದ ಅಣತಿ ಯೋಗೇಶ್, ಚಿಪ್ಪಿನ ಚಂದ್ರು, ಚಂದ್ರಪ್ಪ, ರೇವಣ್ಣ, ಕೆ.ಪಿ.ನಟರಾಜ್, ಗ್ರಾಪಂ ಮಾಜಿ ಉಪಾಧ್ಯಕ್ಷ ವಿಜಯಕುಮಾರ್, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಾಗೇಶ್, ಪಿಡಿಒ ಗಂಗಾಧರ್ ಪಟೇಲ್ ಹಾಜರಿದ್ದರು.

## ಪರಿಸರ ಸ್ವಚ್ಛತೆಗೆ ಎಲ್ಲರೂ ಗಮನ ಹರಿಸಬೇಕು



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಸುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳದಿದ್ದರೆ ಭವಿಷ್ಯದ ಪೀಳಿಗೆಗೆ ನಾವು ನೀಡುವ ಕೊಡುಗೆ ಶೂನ್ಯವಾಗಿರುತ್ತದೆ, ಪಾಪ ನಾಶಕ್ಕೆ ಗಂಗಾ ನದಿಯಲ್ಲಿ ಸ್ನಾನ ಮಾಡಿ ಶಾಂಪು, ಸಾಬೂನು ಕವರ್‌ಗಳನ್ನು ಅಲ್ಲೇ ಎಸೆಯುವುದರಿಂದ ಯಾವ ಪಾಪಗಳು ಪರಿಹಾರವಾಗುವುದಿಲ್ಲ ಎಂದು ನಾಗಮಂಗಲದ ಯೋಗ ಹಾಗೂ ಆಯುರ್ವೇದ ಗುರು ಲಕ್ಷ್ಮಣ್ ತಿಳಿಸಿದರು. ಪಟ್ಟಣದ ರಾಘವೇಂದ್ರ ಮಠದ ಶ್ರೀ ವಿಶ್ವೇಶ್ವರ ಪೇಜಾವರ ಸ್ವಾಮೀಜಿ ಅವರ ಭವನದಲ್ಲಿ ಶ್ರೀ ರಾಘವೇಂದ್ರ ಯೋಗ ಕೇಂದ್ರದ ಪ್ರಥಮ ವಾರ್ಷಿಕೋತ್ಸವ ಸಮಾರಂಭದಲ್ಲಿ ಮಾತನಾಡಿ, ಜೀವನದಲ್ಲಿ ಸ್ವಚ್ಛತೆಯ ಮನಸ್ಸು, ಪರಿಸರ, ವಾತಾವರಣ, ವ್ಯವಹಾರ ಇದ್ದಲ್ಲಿ ಬದುಕಿನ ಸಾರ್ಥಕ ಅರ್ಥಪೂರ್ಣವಾಗಿರುತ್ತದೆ.

ನಮ್ಮ ಆಲೋಚನೆ ಮತ್ತು ಭಾವನೆಗಳು ಇನ್ನೊಬ್ಬರಿಗೆ ನೋವು ಕೊಡದೆ ದೋಷಗಳನ್ನು ಹುಡುಕುವುದನ್ನು ಬಿಟ್ಟು ಬದುಕಿನಲ್ಲಿ ಸಕಾರಾತ್ಮಕ ಭಾವನೆಗಳನ್ನು ಬೆಳೆಸಿಕೊಳ್ಳುವಂತಿರಬೇಕು ಎಂದರು.

ಯೋಗ ಶಾಲೆಯ ಅಶೋಕ್ ಮಾತನಾಡಿ, ವರ್ಷಪೂರ್ತಿ ಯೋಗ ಶಿಬಿರ ಮಾಡುತ್ತಾ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಶಾಲೆ ಶ್ರಮಿಸುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಪ್ರಭಾಕರ್, ನಂಜೇಗೌಡ, ಶ್ರೀಮಠದ ಕಾರ್ಯದರ್ಶಿ ಪುಟ್ಟಸ್ವಾಮೀಗೌಡ, ಪೋಸ್ಟ್ ನಾಗೇಶ್ ಮಾತನಾಡಿದರು.

ಶಾಲೆಯ ಹಿರಿಯ ಯೋಗ ಪಟುಗಾಳದ ಅನಿತಾ, ವಿಜಯ ಲಕ್ಷ್ಮಿ ಪುಟ್ಟಣ್ಣ, ವೀಣ ಅವರನ್ನು ಸನ್ಮಾನಿಸಲಾಯಿತು. ಅನಿತಾ ಸ್ವಾಗತ, ಶಿವರಾಂ ನಿರೂಪಣೆ, ರಮೇಶ್ ವಂದಿಸಿದರು.

## ಇತಿಹಾಸದಲ್ಲಿ ಈ ದಿನ

### ನವೆಂಬರ್-13

1642: ಇಂಗ್ಲೆಂಡ್‌ನಲ್ಲಿ ನಡೆದ ನಾಗರಿಕ ಯುದ್ಧದಲ್ಲಿ ಪ್ರಿನ್ಸ್ ಚಾರ್ಲ್ಸ್ ನೇತೃತ್ವದ ಪಡೆ ಎಡ್ಜ್‌ಹಿಲ್ ಯುದ್ಧದಲ್ಲಿ ಭಾಗವಹಿಸಿತು.

1927: ಹಾಲಿವುಡ್‌ನ ಮೊದಲ ಮ್ಯೂಸಿಕಲ್ ಫಿಲ್ಮ್ ದಿ ಜಾಝ್ ಸಿಂಗರ್ ಅಮೆರಿಕಾದಾದ್ಯಂತ ಬಿಡುಗಡೆ ಆಯಿತು.

1940: ದ್ವಿತೀಯ ಮಹಾಯುದ್ಧದ ಸಮಯದಲ್ಲಿ ಜರ್ಮನಿಯು ಇಂಗ್ಲೆಂಡ್‌ನ ಕೋವೆಂಟ್ರಿ ನಗರವನ್ನು ಭಾರೀ ಬಾಂಬ್ ದಾಳಿಗೆ ಒಳಪಡಿಸಿತು.

1947: ಭಾರತದ ಮೊದಲ ಗವರ್ನರ್ ಜನರಲ್ ಲಾರ್ಡ್ ಮೌಂಟ್ಬ್ಯಾಟನ್ ಅವರು ಆಲ್ ಇಂಡಿಯಾ ರೇಡಿಯೋಯಲ್ಲಿ ಭಾರತದ ಸ್ವಾತಂತ್ರ್ಯ ಪ್ರಕ್ರಿಯೆಯ ಕುರಿತು ಭಾಷಣ ಮಾಡಿದರು.

1956: ಅಮೆರಿಕಾದ ಸುಪ್ರಸಿದ್ಧ ಸಂಗೀತಕಾರ ಎಲ್ವಿಸ್ ಪ್ರೆಸ್ಲಿ ಅವರು ಮೊದಲ ಬಾರಿಗೆ ಟಿವಿಯಲ್ಲಿ ಹೌಂಡ್ ಡಾಗ್ ಹಾಡನ್ನು ಪ್ರದರ್ಶಿಸಿದರು.

1985: ಕೊಲಂಬಿಯಾದ ನೆವಾಡೊ ಡೆಲ್ ರೂಯ್ಸ್ ಜ್ವಾಲಾಮುಖಿ ಸ್ಫೋಟದಿಂದ 23,000 ಜನರು ಸಾವಿಗೀಡಾದರು.

1994: ಸ್ವೀಡನ್ ಯುರೋಪಿಯನ್ ಯೂನಿಯನ್ ಸೇರ್ಪಡೆಗೆ ಮತ ಚಲಾಯಿಸಿತು.

#### ಜನನ

1850: ರಾಬರ್ಟ್ ಲೂಯಿಸ್ ಸ್ಟೀವನ್ಸನ್ Treasure Island ಕಾದಂಬರಿಯ ಖ್ಯಾತ ಸ್ಕಾಟಿಷ್ ಸಾಹಿತಿ

1955: ವೂಪಿ ಗೋಲ್ಡ್‌ಬರ್ಗ್ ಅಮೆರಿಕಾದ ಪ್ರಸಿದ್ಧ ನಟಿ ಹಾಗೂ ಕಾಮಿಡಿಯನ್

1967: ಜೂಹಿ ಚಾವ್ಲಾ, ಭಾರತೀಯ ನಟಿ ಹಾಗೂ ನಿರ್ಮಾಪಕಿ

#### ಮರಣ

1868: ಗ್ಯೋಥೆ ಪ್ರಶಸ್ತಿ ಪಡೆದ ಜರ್ಮನ್ ರಸಾಯನ ಶಾಸ್ತ್ರಜ್ಞ ಅಗಸ್ಟಸ್ ಕೇಕುಲೆ

1998: ಭಾರತದ ಖ್ಯಾತ ನಟಿ ಮತ್ತು ರಾಜಕಾರಣಿ ಪದ್ಮಿನಿ

## ಚುನಾವಣೆ ಎದುರಿಸಲು ಕಾರ್ಯಕರ್ತರು ಸಜ್ಜಾಗಿ: ಬಾಲಕೃಷ್ಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ಮುಂಬರುವ ಗ್ರಾಮ, ತಾಲ್ಲೂಕು ಹಾಗೂ ಜಿಲ್ಲಾ ಪಂಚಾಯಿತಿ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳು ಗೆಲುವು ಸಾಧಿಸಬೇಕೆಂದರೆ ಕಾರ್ಯಕರ್ತರು ಈಗಿನಿಂದಲೇ ಮೈಕೊಡವಿ ಕೆಲಸ ಮಾಡಬೇಕು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಕರೆ ನೀಡಿದರು.

ತಾಲ್ಲೂಕಿನ ನುಗ್ಗೇಹಳ್ಳಿ ಗ್ರಾಮದಲ್ಲಿ ಕಾಂಗ್ರೆಸ್ ಬೆಂಬಲಿತ ಹಾಲಿ ಸದಸ್ಯೆ ರೇಣುಕಾ ಕಾಳೇಶ್ ಹಾಗೂ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರ ಜೆಡಿಎಸ್ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿ, ತಮ್ಮ ಅಭಿವೃದ್ಧಿ ಕೆಲಸಗಳನ್ನು ಮೆಚ್ಚಿ ಬಾಗೂರು ಹೋಬಳಿ ಕೇಂದ್ರದ ಹಾಲಿ ಗ್ರಾಮ ಪಂಚಾಯಿತಿ ಸದಸ್ಯೆ ರೇಣುಕಾ ಕಾಳೇಶ್ ಸೇರಿದಂತೆ 30ಕ್ಕೂ ಹೆಚ್ಚು ಕಾಂಗ್ರೆಸ್ ಕಾರ್ಯಕರ್ತರು ಜೆಡಿಎಸ್ ಸೇರಿದ್ದಾರೆ ಎಂದು ಹೇಳಿದರು.


ಗ್ರಾಮ ಪಂಚಾಯಿತಿ ಸೇರಿದಂತೆ ಎಲ್ಲಾ ಚುನಾವಣೆಗೂ ಪಕ್ಷ ಸಂಘಟಿಸಲು ಚುನಾವಣೆಗೆ ಸಜ್ಜಾಗಲು ಉತ್ತಮ ವೇದಿಕೆಯಾಗಿದೆ. ಹೋಬಳಿ ಕೇಂದ್ರದಲ್ಲಿ ಸುಮಾರು 2 ಕೋಟಿ ರೂ. ವೆಚ್ಚದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ಹಾಗೂ ಸುಮಾರು 5 ಕೋಟಿ ರೂ. ವೆಚ್ಚದಲ್ಲಿ ಸೇತುವೆ ಹಾಗೂ ಮುಖ್ಯ ರಸ್ತೆಗಳ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ. ಗ್ರಾಮದ ಅನೇಕ ಬಡಾವಣೆಗಳಲ್ಲಿ ಕಾಂಕ್ರಿಟ್ ರಸ್ತೆ ಒಳಚರಂಡಿ ನಿರ್ಮಾಣಕ್ಕೆ ಹೆಚ್ಚಿನ ಅನುದಾನ ನೀಡಲಾಗಿದೆ ಎಂದರು.

ಗ್ರಾಮ ದೇವತೆ ಶ್ರೀ ಸಂತೆಕಾಳೇಶ್ವರಿ ದೇವಾಲಯ ಲೋಕಾರ್ಪಣೆಯಾಗಿದೆ. ಭಕ್ತರ ಒತ್ತಾಯದಂತೆ ತೇರು ನಿರ್ಮಾಣವಾಗುತ್ತಿದ್ದು ಈಗಾಗಲೇ ನಾನು ಹೆಚ್ಚಿನ ಸಹಾಯ ಮಾಡಿದ್ದೇನೆ. ಉದ್ಯಮಿ ಯೋಗೇಶ್ ಅವರು 5 ಲಕ್ಷ ರೂ. ನೀಡುತ್ತಿದ್ದು ಅನೇಕ ದಾನಿಗಳಿಂದ ಇನ್ನೂ ಹೆಚ್ಚಿನ ಹಣಕಾಸಿನ ನೆರವು ಕೊಡಿಸುಸುತ್ತೇನೆ. ಮಾರ್ಚ್‌ನಲ್ಲಿ ಶ್ರೀ ಸಂತೆಕಾಳೇಶ್ವರಿ ಜಾತ್ರೆ ಹಾಗೂ ರಥೋತ್ಸವ ನಡೆಯುವುದರಿಂದ ಅಷ್ಟರೊಳಗೆ ರಥದ ಕೆಲಸ ಪೂರ್ಣಗೊಳಿಸುವಂತೆ ತಿಳಿಸಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಬಿ.ಎಚ್. ಶಿವಣ್ಣ ಮಾತನಾಡಿ, ಶಾಸಕರ ಅಭಿವೃದ್ಧಿ ಕೆಲಸಗಳನ್ನು ಮೆಚ್ಚಿ ಕಾಂಗ್ರೆಸ್ ಬೆಂಬಲಿತ ಸದಸ್ಯರು ಸೇರಿದಂತೆ 30ಕ್ಕೂ ಹೆಚ್ಚು ಕಾರ್ಯಕರ್ತರು ಜೆಡಿಎಸ್ ಸೇರಿದ್ದಾರೆ ಎಂದು ಹೇಳಿದರು.

ಎಪಿಎಂಸಿ ಮಾಜಿ ಮೂಡನಹಳ್ಳಿ ಚಂದ್ರಣ್ಣ, ವಿ.ಎನ್. ಮಂಜುನಾಥ್, ಉದ್ಯಮಿ ಅಣತಿ ಯೋಗೀಶ್, ತಾಪಂ ಮಾಜಿ ಸದಸ್ಯ ಓಬಳಾಪುರ ಬಸವರಾಜ್, ಮಾಜಿ ಉಪಾಧ್ಯಕ್ಷ ಮಲ್ಲೇಶ್, ಟಿಎಪಿಎಂಎಸ್ ನಿರ್ದೇಶಕ ಕುಂಬಾರಹಳ್ಳಿ ರಮೇಶ್, ಗ್ರಾಪಂ ಅಧ್ಯಕ್ಷ ಅಣ್ಣೇಗೌಡ, ಮಾಜಿ ಅಧ್ಯಕ್ಷರಾದ ಕೆಂಪೇಗೌಡ, ಬಿ.ಪಿ. ಲಕ್ಷ್ಮಣ್, ಸದಸ್ಯರಾದ ರಂಗಸ್ವಾಮಿ, ಎಲ್‌ಐಸಿ ಯೂನಿಯನ್ ಅಧ್ಯಕ್ಷ ಕಾಂತರಾಜ್, ಕೃಷಿ ಪತ್ತಿನ ನಿರ್ದೇಶಕ ಹರೀಶ್, ಅರ್ಚಕರಾದ ಕಾಳಪ್ಪ, ಸೋಮಶೇಖರ್, ನಿವೃತ್ತ ಸೈನಿಕರಾದ ಮಧು, ಸೋಮಶೇಖರ್, ರೂಪೇಶ್, ನಾರಾಯಣ್, ಮುಖಂಡರಾದ ಮನು, ಚಂದ್ರೇಗೌಡ, ಜಯರಾಮ್, ಚಿರಂಜೀವಿ, ಯುವ ಮುಖಂಡ ಧರಣೇಂದ್ರ ಇತರರಿದ್ದರು.

## ಶಿಕ್ಷಣದಿಂದ ಮಾತ್ರ ದೇಶ ಪ್ರಗತಿ: ಸಿಮೆಂಟ್ ಮಂಜು



ಆಲೂರು: ಆರೋಗ್ಯ ಮತ್ತು ಶಿಕ್ಷಣದಿಂದ ಮಾತ್ರ ದೇಶ ಪ್ರಗತಿ ಹೊಂದಲು ಸಾಧ್ಯ ಎಂದು ಶಾಸಕ ಸಿಮೆಂಟ್ ಮಂಜು ಅಭಿಪ್ರಾಯಪಟ್ಟರು.

ಪಟ್ಟಣದ ಬಿಕ್ಕೋಡು ರಸ್ತೆಯಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಏರ್ಪಡಿಸಿದ್ದ ಕುಂದೂರು ಹೋಬಳಿ ಕೇಂದ್ರಕ್ಕೆ ಮಂಜೂರಾಗಿರುವ ಡಾ. ಅಂಬೇಡ್ಕರ್ ವಸತಿ ಶಾಲೆ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣ ಎನ್ನುವುದು ಹುಲಿ ಹಾಲು ಇದ್ದಂತೆ. ಅದನ್ನು ಕುಡಿದವರು ಘರ್ಜಿಸಲೇಬೇಕು. ಕಳೆದ ವರ್ಷದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ವಿದ್ಯಾರ್ಥಿಗಳು ಶೇ. 100ರಷ್ಟು ಫಲಿತಾಂಶದ ಮೂಲಕ ತಾಲೂಕಿಗೆ ಕೀರ್ತಿ ತಂದಿದ್ದಾರೆ. ಕುಂದೂರು ಹೋಬಳಿಯಲ್ಲಿ ಡಾ. ಅಂಬೇಡ್ಕರ್ ವಸತಿ ಶಾಲೆ ತೆರೆಯಬೇಕೆಂದು ಸರ್ಕಾರಕ್ಕೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಶಾಲೆ ಮಂಜೂರು ಮಾಡಿರುವುದರಿಂದ ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ. ನೂತನ ಕಟ್ಟಡ ನಿರ್ಮಾಣವಾಗಬೇಕಾಗಿರುವುದರಿಂದ ಸದ್ಯಕ್ಕೆ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ತರಗತಿ ಪ್ರಾರಂಭವಾಗಿದೆ. ಸದ್ಯ 22 ವಿದ್ಯಾರ್ಥಿಗಳು ನೊಂದಣಿಯಾಗಿದ್ದಾರೆ. ಕೆಲವೇ ದಿನಗಳಲ್ಲಿ ಶಾಲೆಗೆ ಬೇಕಾದ ಸುಮಾರು ಹತ್ತು ಎಕರೆ ಜಾಗವನ್ನು ಕಂದಾಯ ಇಲಾಖೆ ಮೂಲಕ ಹಸ್ತಾಂತರ ಪಡೆದು ಕಟ್ಟಡ ನಿರ್ಮಾಣ ಮಾಡಲಾಗುವುದು.

ಒಂದು ಕಾಲದಲ್ಲಿ ಭಾರತ ದೇಶವನ್ನು ಹಾವಡಿಗರ ದೇಶವೆಂದು ಹಾಸ್ಯ ಮಾಡುತ್ತಿದ್ದರು. ನರೇಂದ್ರಮೋದಿಜಿಯವರು ಪ್ರಧಾನ ಮಂತ್ರಿಗಳಾದ ನಂತರ, ಪ್ರಪಂಚದಲ್ಲಿ ಮೂರನೆ ಅತಿ ದೊಡ್ಡ ಆರ್ಥಿಕ ದೇಶವಾಗಿದೆ. ನಾವೆಲ್ಲರೂ ಎಂದೆಂದೂ ಸ್ವದೇಶಿ ಉತ್ಪನ್ನಗಳನ್ನು ಬಳಸಲು ಮುಂದಾಗಬೇಕು ಎಂದರು.

ಪ್ರಪಂಚದ ಯಾವುದೇ ದೇಶದಲ್ಲಿ ಅವಲೋಕಿಸಿದರೆ ಅತಿ ಹೆಚ್ಚು ವಿಜ್ಞಾನಿಗಳು, ಐಟಿಬಿಟಿ ಇಂಜಿನಿಯರ್, ವೈದ್ಯರು ಇರುವುದು ಭಾರತೀಯರು ಎಂದು ಹೆಮ್ಮೆಯಿಂದ ಹೇಳಿಕೊಳ್ಳಬಹುದು. ಕ್ರೀಡೆ, ಬಾಹ್ಯಾಕಾಶ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ದೇಶ ಕ್ರಾಂತಿಯನ್ನು ಮಾಡಿದೆ ಎಂದರು.

ಸಮಾರಂಭದಲ್ಲಿ ಸಮಾಜ ಕಲ್ಯಾಣ ಇಲಾಖೆ ಜಿಲ್ಲಾ ಉಪ ನಿರ್ದೇಶಕ ದೂದ್‌ಪೀರ್, ಸಹಾಯಕ ನಿರ್ದೇಶಕ ಕೌಸರ್, ತಾ.ಪಂ. ವ್ಯವಸ್ಥಾಪಕ ಕೇಶವಮೂರ್ತಿ, ಪ್ರಾಂಶುಪಾಲ ಪ್ರಕಾಶ್, ಬೋಧಕ, ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.

## ಕರಾಟೆ ಸ್ಪರ್ಧೆ: ಅರಬಿಂದ್ ಆದಿತ್ಯಗೆ ಬೆಳ್ಳಿ ಪದಕ



ಹಾಸನ: ಚಿಕ್ಕಬಳ್ಳಾಪುರದಲ್ಲಿ ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ಟೈಕ್ವಾಂಡೊ ಕರಾಟೆ ಸ್ಪರ್ಧೆಯಲ್ಲಿ ನಗರದ ಆದಿಚುಂಚನಗಿರಿ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿ ಅರಬಿಂದ್ ಆದಿತ್ಯ ದ್ವಿತೀಯ ಸ್ಥಾನನ ಪಡೆದು ಬೆಳ್ಳಿ ಪದಕಕ್ಕೆ ಭಾಜನರಾಗಿದ್ದಾರೆ. ಶಾಲಾ ಶಿಕ್ಷಣ ಇಲಾಖೆ ವತಿಯಿಂದ 17 ವಯೋಮಿತಿಯ ವಿದ್ಯಾರ್ಥಿಗಳಿಗಾಗಿ 57 ಕೆ.ಜಿ. ವಿಭಾಗದಲ್ಲಿ ಸ್ಪರ್ಧಿಸಿದ್ದರು. ಅಮೆಚೂರ್ ಬಾಡಿ ಬಿಲ್ಡರ್ ಸಂಸ್ಥೆಯ ಮಹದೇವ ತರಬೇತಿ ನೀಡಿದ್ದಾರೆ. ಸಂಸ್ಥೆಯ ಅಧ್ಯಕ್ಷ ಶರತ್ಚಂದ್ರ, ಜಿಮ್ ತರಬೇತುದಾರ ನಿರಂಜನ್ ರಾಜ್ ಹಾಗೂ ಪೋಷಕರು ವಿದ್ಯಾರ್ಥಿಗೆ ಅಭಿನಂದಿಸಿದ್ದಾರೆ.

## ನ.15ಕ್ಕೆ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ತರಬೇತಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಾಹಿತಿ ಹಕ್ಕು ಕಾಯ್ದೆ ಕುರಿತು ಜಿಲ್ಲೆಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ನ. 15ರಂದು ಜಿಲ್ಲಾ ಪಂಚಾಯಿತಿ ಹೊಯ್ಸಳ ಸಭಾಂಗಣದಲ್ಲಿ ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದ್ದು ರಾಜ್ಯ ಮಾಹಿತಿ ಆಯುಕ್ತ ರುದ್ರಣ್ಣ ಹರ್ತಿಕೋಟೆ ಮತ್ತು ಎಸ್. ರಾಜಶೇಖರ್ ತರಬೇತಿ ನಡೆಸಿಕೊಡುವರು. ಶಿಬಿರದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಪರಿಣಾಮಕಾರಿ ಜಾರಿ, ಅರ್ಜಿಗಳ ಸ್ವೀಕೃತಿ ಮತ್ತು ವಿಲೇವಾರಿ ವಿಧಾನ, ಬಾಕಿ ಇರುವ ಅರ್ಜಿಗಳ ನಿರ್ವಹಣೆ ಕುರಿತಾಗಿ ಮಾರ್ಗದರ್ಶನ ನೀಡಲಾಗುವುದು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248